**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**OS**-366/2024 **PW**-1

**ದಿಃ 20.03.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀಮತಿ ಜೆ ಎಫ್ ಜಿ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಮುಖ್ಯವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ದಿನಾಂಕಃ21.03.2022 ರ ನೋಂದಾಯಿತ ಖರೀದಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಪ್ರಥಮ ವರ್ತಮಾನ ವರದಿ ಹಾಗೂ ದೂರಿನ ದೃಡೀಕೃತ ಪ್ರತಿಯನ್ನು ಒಟ್ಟಾಗಿ ನಿಪಿ 2 ಎಂದು, ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ 3 ಎಂದು, ಅಂಚೆ ರಶೀದಿಯನ್ನು ನಿಪಿ 4 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ 5 ಎಂದು, ಮತ್ತೊಂದು ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ 6 ಎಂದು, ಅಂಚೆ ರಶೀದಿಯನ್ನು ನಿಪಿ 7 ಎಂದು, ಅಂಚೆ ಲಕೋಟೆಯನ್ನು ನಿಪಿ 8 ಎಂದು ಅದರಲ್ಲಿರುವ ಪ್ರತಿಯನ್ನು ನಿಪಿ 8 ಎ ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು)**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

1 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.